# ಪ್ರತಿಭಾನ್ವೇಷಣೆ ಸ್ಪರ್ಧೆ

ಸಕಲೇಶಪುರ ಜೆಎಸ್‌ಎಸ್ ಶಿಕ್ಷಣ ಮಹಾವಿದ್ಯಾಲಯದಲ್ಲಿ (ಬಿ.ಇಡಿ ಕಾಲೇಜು) 2022-23 ನೇ ಸಾಲಿನ ಪ್ರಥಮ ಸೆಮಿಸ್ಟರ್ ಪ್ರಶಿಕ್ಷಣಾರ್ಥಿಗಳಿಗೆ 14, 15 ಮಾರ್ಚ್ 2023 ರಂದು ಎರಡು ದಿನಗಳ ಪ್ರತಿಭಾನ್ವೇಷಣೆ (ಟ್ಯಾಲೆಂಟ್ ಹಂಟ್) ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ಪ್ರಶಿಕ್ಷಣಾರ್ಥಿಗಳೊಳಗಿನ ಪ್ರತಿಭೆಯನ್ನು ಪತ್ತೆ ಹಚ್ಚಿ ಪ್ರೋತ್ಸಾಹಿಸುವುದು ಇದರ ಉದ್ದೇಶವಾಗಿದೆ.




ಸ್ಪರ್ಧೆಯಲ್ಲಿ ಮೊದಲ ಸೆಮಿಸ್ಟರ್ ಪ್ರಶಿಕ್ಷಣಾರ್ಥಿಗಳು ಡ್ಯಾನ್ಸ್, ಸ್ಥಳದಲ್ಲೇ ಚಿತ್ರಬಿಡಿಸುವ ಸ್ಪರ್ಧೆ, ಏಕವ್ಯಕ್ತಿ ಗಾಯನ, ಕವನ ವಾಚನ, ಕಿರುನಾಟಕ ಮುಂತಾದ ವಿವಿಧ ಚಟುವಟಿಕೆಗಳಲ್ಲಿ ಭಾಗವಹಿಸಿದರು.










ಪ್ರಶಿಕ್ಷಣಾರ್ಥಿಗಳು ಎಲ್ಲಾ ಕ್ಷೇತ್ರಗಳಲ್ಲಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸುವ ಮೂಲಕ ಪರಸ್ಪರ ಕಠಿಣ ಸ್ಪರ್ಧೆಯನ್ನು ನೀಡಿದರು.

ಪ್ರಾಂಶುಪಾಲರಾದ ಡಾ. ನಂಜುಂಡಪ್ಪ ಎಸ್ ರವರು ಮಾತನಾಡುತ್ತಾ, ವಿದ್ಯಾರ್ಥಿಗಳ ಒಟ್ಟಾರೆ ವ್ಯಕ್ತಿತ್ವವನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ ಪ್ರತಿ ವರ್ಷ ಈ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಪ್ರತಿಭಾನ್ವೇಷಣೆ ಸ್ಪರ್ಧೆಯಲ್ಲಿ ಭಾಗವಹಿಸುತ್ತಿರುವ ಎಲ್ಲಾ ಪ್ರಶಿಕ್ಷಣಾರ್ಥಿಗಳಿಗೂ ಅಭಿನಂದನೆಗಳು ಮುಕ್ತ ಮನಸ್ಸಿನಿಂದ ಭಾಗವಹಿಸಿ ಎಂದು ತಿಳಿಸಿದರು.





ಕಾರ್ಯಕ್ರಮವನ್ನು ಆಯೋಜಿಸಿದ್ದ ದೈಹಿಕ ಶಿಕ್ಷಣ ನಿರ್ದೇಶಕರಾದ ಶ್ರೀ ಕಾಳೇಗೌಡ ರವರು ಮಾತನಾಡುತ್ತಾ ಈ ಪ್ರತಿಭಾನ್ವೇಷಣೆ ಕಾರ್ಯಕ್ರಮದ ಮೂಲಕ ನಿಮ್ಮಗಳ ಪ್ರತಿಭೆ ಗಮನಿಸಿ ಮುಂಬರುವ ಶೈಕ್ಷಣಿಕ ಕಾರ್ಯಕ್ರಮಗಳಿಗೆ ಪ್ರತಿಭಾವಂತ ಪ್ರಶಿಕ್ಷಣಾರ್ಥಿಗಳನ್ನು ಸಿದ್ಧಪಡಿಸುವ ಸಮಯ ಬಂದಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಡಾ. ವಿಕ್ರಮ್ ಸಿ.ಬಿ, ಡಾ. ಪ್ರಭುಸ್ವಾಮಿ ಎಂ, ಡಾ. ದಿನೇಶ್ ಎಂ.ಕೆ ಹಾಗೂ ಶ್ರೀ ತಮ್ಮಯ್ಯ ಹೆಚ್.ಬಿ ರವರು ತೀರ್ಪುಗಾರರಾಗಿ ಕಾರ್ಯ ನಿರ್ವಹಿಸಿದರು.

ಕಾರ್ಯಕ್ರಮದಲ್ಲಿ ಪ್ರಥಮ ಹಾಗೂ ಮೂರನೇ ಸೆಮಿಸ್ಟರ್ ಪ್ರಶಿಕ್ಷಣಾರ್ಥಿಗಳು ಭಾಗವಹಿಸಿದ್ದರು.

***** - *****

PRINCIPAL
J.S.S. Institute of Education
P.B. 26, SAKALESHPUR-573 134
Hassan Dist